# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 966(1324)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಆರ್. ಧರ್ಮಸೇನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ವಿಷಯ : ಎಸ್. ಸಿ. /ಎಸ್. ಟಿ. ಆಡಳಿತವಿರುವ ಶಾಲೆಗಳಿಗೆ ಶುಲ್ಕದಲ್ಲಿ 50% ರಿಯಾಯಿತಿ ಮುಂದುವರೆಸುವ ಬಗ್ಗೆ

(ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ನಡೆಸುತ್ತಿರುವ ಪ್ರಾಥಮಿಕ ಪ್ರೌಢ ಮತ್ತು ಪದವಿಪೂರ್ವ ಕಾಲೇಜುಗಳ ಮಂಜೂರಾತಿ ಅರ್ಜಿ ಶುಲ್ಕ, ಸಂಸ್ಕರಣ ಶುಲ್ಕ, ನವೀಕರಣ ಶುಲ್ಕ, ಇತ್ಯಾದಿ ಶುಲ್ಕಗಳಲ್ಲಿ ಶೇಕಡ 50 ರಷ್ಟು ರಿಯಾಯಿತಿಯನ್ನು 2018ರ ಆದೇಶದಲ್ಲಿ ರದ್ದುಪಡಿಸಿರುವುದು ನಿಜವೇ;

(ಆ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ನಡೆಸುವ ಶಿಕ್ಷಣ ಸಂಸ್ಥೆಗಳಿಗೆ ಈ ಶುಲ್ಕಗಳಲ್ಲಿ 50% ರಿಯಾಯಿತಿ ರದ್ದುಪಡಿಸಿದರೆ ಈ ಸಂಸ್ಥೆಗಳು ತುಂಬಾ ಸಂಕಷ್ಟಕ್ಕೊಳಗಾಗುವುದರಿಂದ 2018ರ ಆದೇಶವನ್ನು ಹಿಂಪಡೆಯಲು ಕ್ರಮ ವಹಿಸಲಾಗುವುದೇ ;

(ಇ) ಎಸ್. ಸಿ. ಪಿ/ಟಿ. ಎಸ್. ಪಿ ಹಣದಿಂದ ಹಣ ಹೊಂದಿಸಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಶಾಲೆಗಳಿಗೆ ಹಿಂದೆ ನೀಡುತ್ತಿದ್ದಂತೆ ಶುಲ್ಕಗಳಲ್ಲಿ 50% ರಿಯಾಯಿತಿಯನ್ನು ಮುಂದುವರೆಸಲಾಗುವುದೇ?